# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | **1099** |
| ಮಾನ್ಯ ಸದಸ್ಯರ ಹೆಸರು | ಶ್ರೀ ಎಸ್. ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 15.12.2023 |
| ಉತ್ತರಿಸುವ ಸಚಿವರು | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಗೆ ಬರುವ ವಿವಿಧ ಬಾಲಕ/ಬಾಲಕಿಯರ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು; ಹಾಗೂ ಈ ವಿದ್ಯಾರ್ಥಿ ನಿಲಯಗಳಲ್ಲಿ ವಾಸಿಸುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;</td><td>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಒಟ್ಟು 2443 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆ. ಈ ವಿದ್ಯಾರ್ಥಿನಿಲಯಗಳಲ್ಲಿ 212035 ವಿದ್ಯಾರ್ಥಿಗಳು ಪ್ರವೇಶ ಪಡೆದಿದ್ದು, ಪ್ರಸ್ತುತ ವೃತ್ತಿಪರ ಹಾಗೂ ಸ್ನಾತಕೋತ್ತರ ಕೋರ್ಸುಗಳ ಪ್ರವೇಶ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.<br><br>ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಬಾಲಕರ ಹಾಗೂ ಬಾಲಕಿಯರ ವಿದ್ಯಾರ್ಥಿನಿಲಯಗಳ ವಿವರಗಳು ಈ ಕೆಳಕಂಡಂತಿದೆ.<br><br>
<table>
<tr><th></th><th>ವಿದ್ಯಾರ್ಥಿ ನಿಲಯಗಳ ಸಂಖ್ಯೆ (ಬಾಲಕರು)</th><th>ಪ್ರವೇಶಾತಿ</th><th>ವಿದ್ಯಾರ್ಥಿ ನಿಲಯಗಳ ಸಂಖ್ಯೆ (ಬಾಲಕಿಯರು)</th><th>ಪ್ರವೇಶಾತಿ</th></tr>
<tr><td>ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಳು</td><td>996</td><td>51109</td><td>234</td><td>15339</td></tr>
<tr><td>ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯಳು</td><td>525</td><td>66446</td><td>638</td><td>79141</td></tr>
<tr><td>ಒಟ್ಟು</td><td>1521</td><td>117555</td><td>922</td><td>94480</td></tr>
</table>
</td></tr>
<tr><td>ಆ)</td><td>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಮೂಲಭೂತ ಸೌಕರ್ಯಗಳಾದ ಉತ್ತಮ ಗುಣಮಟ್ಟದ ಆಹಾರ ಮತ್ತು ಕೊಠಡಿಗಳ ಸ್ವಚ್ಛತೆ ಇಲ್ಲದಿರುವುದರಿಂದ ಇವುಗಳನ್ನು ನಿವಾರಿಸಲು ಸರ್ಕಾರ ವಿಶೇಷ ಅನುದಾನವನ್ನು ನೀಡಿ ಈ ತೊಂದರೆಗಳನ್ನು ಪರಿಹಾರ ಮಾಡಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ?</td><td>ಆಹಾರ ಸಾಮಗ್ರಿಗಳ ಬೆಲೆ ಏರಿಕೆಯ ಹಿನ್ನೆಲೆಯಲ್ಲಿ ಈ ಹಿಂದಿನ ವರ್ಷಗಳಲ್ಲಿ ನಿಲಯಾರ್ಥಿಗಳ ಆಹಾರ ವೆಚ್ಚವನ್ನು ಹಂತ ಹಂತವಾಗಿ ಹೆಚ್ಚಿಸಲಾಗಿರುತ್ತದೆ. 2022-23ನೇ ಸಾಲಿನಲ್ಲಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ಪ್ರತಿ ವಿದ್ಯಾರ್ಥಿಯ ಆಹಾರ ವೆಚ್ಚವನ್ನು ಮಾಹೆಯಾನ ರೂ.1500/- ರಿಂದ ರೂ.1650/-ಕ್ಕೆ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಪ್ರತಿ ವಿದ್ಯಾರ್ಥಿಯ ಆಹಾರ ವೆಚ್ಚವನ್ನು ಮಾಹೆಯಾನ ರೂ.1600/- ರಿಂದ ರೂ.1750/- ಕ್ಕೆ ಹೆಚ್ಚಿಸಲಾಗಿರುತ್ತದೆ. ನಿಗಧಿಪಡಿಸಿರುವ ಭೋಜನಾ ವೆಚ್ಚಗಳ ದರಕ್ಕನುಗುಣವಾಗಿ ನಿಲಯಗಳಲ್ಲಿ ಮೆನು ಚಾರ್ಟ್ ಸಿದ್ಧಪಡಿಸಿ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಆಹಾರವನ್ನು ನೀಡಲಾಗುತ್ತಿದೆ.<br>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳ ಶೌಚಾಲಯಗಳ/ ಆವರಣದ ಸ್ವಚ್ಛತೆ ಮತ್ತು ಸ್ವಚ್ಛತಾ ಸಾಮಗ್ರಿಗಳ ದರಗಳನ್ನು ಪರಿಷ್ಕರಿಸುವ ಕುರಿತು 2023-24ನೇ ಸಾಲಿನ ಆಯವ್ಯಯದಲ್ಲಿ ಪರಿಗಣಿಸಲಾಗುವುದು ಎಂದು ಆರ್ಥಿಕ ಇಲಾಖೆಯು ಅಭಿಪ್ರಾಯಿಸಿದೆ.</td></tr>
</table>

**ಸಂಖ್ಯೆ: ಹಿಂವಕ 663 ಬಿಎಂಎಸ್ 2023**

**(ಶಿವರಾಜ್ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು